625

14

51/1
3-38

<u>**ಕರ್ನಾಟಕ ಸರ್ಕಾರ**</u>

ನಂ:ಬಿಡಿಸ್.ಎಎಲ್‌ಎನ್(ಪೂ)ಎಸ್‌ಆರ್(ಕೃ.ಹೋ):100/07–08

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ: 07–10–2008.

<u>**ಅಧಿಕೃತ ಜ್ಞಾಪನ**</u>

ವಿಷಯ:– ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್.ಪುರಂ ಹೋಬಳಿ, ಶೀಗೇಹಳ್ಳಿ ಗ್ರಾಮದ ಸರ್ವೆ ನಂ. 51/1ರಲ್ಲಿ 3–38 ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಭೂ ಪರಿವರ್ತನೆ ಕೋರಿ ಶ್ರೀ ಜಿ. ಪ್ರಭಾಕರ್ ಬಿನ್ ಓಬಳೇಶ್, ನಂ. 3/1, ಪಟೇಲ್ ಹೌಸ್, ಆಡುಗೋಡಿ, ಬೆಂಗಳೂರು–560030ರವರ ಅರ್ಜಿ ದಿನಾಂಕ : 31–07–2007.

ಉಲ್ಲೇಖ:–
1) ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್‌ಡಿ 7 ಎಲ್‌ಜಿಪಿ 95 ದಿನಾಂಕ: 7–6–1999.
2) ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್.ಡಿ:56:ಎಲ್‌ಜಿಪಿ 2008 ದಿನಾಂಕ:10–9–2008 ಮತ್ತು 24–9–2008.
3) ತಹಶೀಲ್ದಾರ್, ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ರವರ ವರದಿ ಸಂಖ್ಯೆ ಎಎಲ್‌ಎನ್:ಎಸ್.ಆರ್:(ಕೆ)16/07–08, ದಿನಾಂಕ : 09–08–2007.
4) ಭೂ ಪರಿವರ್ತನಾ ಶುಲ್ಕ ರೂ. 2,15,078–00, 0–02 ಗುಂಟೆ ಪಿ ಖರಾಬ್‌ಗೆ ಕಿಮ್ಮತ್ತು ರೂ. 1,75,000–00 ಹಾಗೂ ಪೋಡಿ ಶುಲ್ಕ ರೂ.55–00 ಒಟ್ಟು ರೂ. 3,90,133–00ಗಳನ್ನು ಚಲನ್ ನಂಬರ್ –, ದಿ: 11–10–2007 ರಂದು ಎಸ್.ಬಿ.ಎಂ.ಗೆ ಅರ್ಜಿದಾರರು ಜಮಾ ಮಾಡಿರುತ್ತಾರೆ.
5) ಏಕಗವಾಕ್ಷಿ ಸಮಿತಿಯ ನಡವಳಿಕೆಗಳ ದಿನಾಂಕ: 30–08–2007.

:: 0 ::

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಕಲಂ 95(2), 95(4) ಮತ್ತು 95(7) ರ ಷರತ್ತುಗಳು, ಹಾಗೂ ಷರತ್ತುಗಳಿಗೊಳಪಡಿಸಿ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ನಿಯಮಗಳು 1994 ರ ನಿಯಮ 107(1) ರಂತೆ ಎಕರೆ ಒಂದಕ್ಕೆ ರೂ. 54,450–00 (ಐವತ್ನಾಲ್ಕು ಸಾವಿರದ ನಾಲ್ಕು ನೂರ ಐವತ್ತು) ಗಳಂತೆ ಅರ್ಜಿದಾರರು ಉಲ್ಲೇಖ (4) ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿದ ಮೇರೆಗೆ ಅರ್ಜಿದಾರರಾದ ಶ್ರೀ ಜಿ. ಪ್ರಭಾಕರ್ ಬಿನ್ ಓಬಳೇಶ್, ನಂ. 3/1, ಪಟೇಲ್ ಹೌಸ್, ಆಡುಗೋಡಿ, ಬೆಂಗಳೂರು–560030ರವರ ಅರ್ಜಿಯನ್ನು ಪರಿಗಣಿಸಿ, ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್.ಪುರಂ ಹೋಬಳಿ, ಶೀಗೇಹಳ್ಳಿ ಗ್ರಾಮದ ಸರ್ವೆ ನಂ. 51/1ರಲ್ಲಿ 3–38 ಎಕರೆ/ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕೆ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1. ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರದಿಂದ ಅಂದರೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ)/ಬಿ.ಎಂ.ಆರ್.ಡಿ.ಎ./(ಸ್ಥಳೀಯ ಯೋಜನಾ ಪ್ರಾಧಿಕಾರ/ ಬಿ.ಎಂ.ಐ.ಸಿ.ಎ.ಪಿ.ಎ/ ಮಾಲಿನ್ಯ ನಿಯಂತ್ರಣಾ ಮಂಡಳಿ ರವರಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.

2. ಈ ಭೂ ಪರಿವರ್ತಿತ ಜಮೀನನ್ನು ವಾಸದ ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಜಮೀನನ್ನು ಪೂರ್ವಾನುಮತಿ ಇಲ್ಲದೇ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.

3. ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ./(ಸ್ಥಳೀಯ ಯೋಜನಾ ಪ್ರಾಧಿಕಾರ/ ಬಿ.ಎಂ.ಐ.ಸಿ.ಎ.ಪಿ.ಎ/ ಪ್ರಾಧಿಕಾರದಿಂದ ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್/ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯದೆ ಪರಭಾರೆ ಮಾಡತಕ್ಕದ್ದು.

-----2.

626 4. ಇತರೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್, ಉದ್ಯಾನವನ, ಸಿ.ಎ ನಿವೇಶನ ಖಾಲಿ ಜಾಗ, ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ./(ಸ್ಥಳೀಯ ಯೋಜನಾ ಪ್ರಾಧಿಕಾರ)/ ಬಿ.ಎಂ.ಐ.ಸಿ.ಎ.ಪಿ.ಎ/ ಪ್ರಾಧಿಕಾರದಿಂದ ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟಪಡಿಸಿದ ನಿಯಮಗಳ ರೀತ್ಯಾ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು.

5. ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದಿತ ನಕ್ಷೆ ಪಡೆಯದೆ ನಿವೇಶನಗಳನ್ನು/ಕಟ್ಟಡಗಳನ್ನು ನೊಂದಣಾಧಿಕಾರಿಗಳಿಂದ ಉಪನೊಂದಣಾಧಿಕಾರಿಗಳಿಂದ ನೊಂದಾವಣೆ ಮಾಡತಕ್ಕದ್ದಲ್ಲ, ಖಾತೆದಾರರು ಒಂದು ವೇಳೆ ಭೂ ಪರಿವರ್ತನೆ ಮಂಜೂರು ಮಾಡಿರುವ ಜಮೀನಿನ ಪೂರ್ಣ ವಿಸ್ತೀರ್ಣವನ್ನು ಮಾರಾಟ ಮಾಡಲು ಉದ್ದೇಶಿಸಿದಲ್ಲಿ ಆದೇಶದ ಅಡ್ಡಿ ಬರುವುದಿಲ್ಲ.

6. ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ರಸ್ತೆ, ಕುಡಿಯುವ ನೀರು, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತ್ಯ ಒದಗಿಸಿಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

7. ಈ ಜಮೀನಿಗೆ ಹಾಕು ಪೋಟ್ ಖರಾಬ್ ಜಮೀನು ಇದ್ದಲ್ಲಿ, ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 67 ರಂತೆ ಸರ್ಕಾರದ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು. ಹಾಗೂ ಪ್ರಸ್ತುತ ಭೂ ಪರಿವರ್ತನೆಗೆ ಒಳಪಟ್ಟಿರುವ ಸರ್ವೆ ನಂ. 51/1 ರಲ್ಲಿ ಆಕಾರ್‌ಬಂದ್ ದಾಖಲೆಯಂತೆ 0-02 ಗುಂಟೆ ಎ. ಖರಾಬ್ ವಿಸ್ತೀರ್ಣಕ್ಕೆ ಕಿಮ್ಮತ್ತು ರೂ. 1,75,000-00 ಗಳನ್ನು ಪಾವತಿಸಿಕೊಳ್ಳಲಾಗಿದ್ದು, ವಾಸದ ಉದ್ದೇಶಕ್ಕಾಗಿ ಬಳಸಲು ಭೂ ಪರಿವರ್ತನೆ ನೀಡಿದೆ. 0-08 ಗುಂಟೆ ವಿಸ್ತೀರ್ಣ ಬಿ ಖರಾಬ್‌ನಲ್ಲಿ ಬರುವ ಕಾರಣ ಇದನ್ನು ಸಾರ್ವಜನಿಕ ಉದ್ದೇಶಕ್ಕಾಗಿ ಮೀಸಲಿರಿಸಲಾಗಿದೆ. ಈ ವಿಸ್ತೀರ್ಣದ ಮೇಲೆ ಅರ್ಜಿದಾರರಿಗೆ ಯಾವುದೇ ಹಕ್ಕು ಇರುವುದಿಲ್ಲ. ಈ ಬಿ ಖರಾಬಿನ ವಿಸ್ತೀರ್ಣದ ಹಕ್ಕು ಯಾವಾಗಲೂ ಸರ್ಕಾರಕ್ಕೆ ಸೇರಿರುತ್ತದೆ. ತಹಸೀಲ್ದಾರ್‌ರವರು ಈ ಬಾಬ್ತು ಆರ್.ಟಿ.ಸಿ.ಯಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.

8. ಸರ್ಕಾರದ ಆದೇಶ ಸಂಖ್ಯೆ ಪಿಡಬ್ಲ್ಯೂಡಿ 7556-665 ಆರ್ ಮತ್ತು ಬಿ-6-54-5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ನಂ. ಪಿ.1/7(11)67, ದಿನಾಂಕ: 01-01-1966 ರಂತೆ ಸರ್ಕಾರವು ಕಾಲಕಾಲಕ್ಕೆ ನೀಡುವ ಆದೇಶದಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 25 ಮೀಟರ್‌ಗಳ ಅಂತರವನ್ನು ಕಾಯ್ದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9. ಭೂ ಪರಿವರ್ತನೆ ಮಂಜೂರಿ ಯಾವ ಉದ್ದೇಶಕ್ಕೆ ಆಗಿರುತ್ತದೆಯೋ ಅದೇ ಉದ್ದೇಶಕ್ಕೆ ಈ ದಿನದಿಂದ ಎರಡು ವರ್ಷಗಳ ಒಳಗಾಗಿ ಉಪಯೋಗಿಸತಕ್ಕದ್ದು.

10. ಈ ಭೂ ಪರಿವರ್ತನಾ ಜಮೀನಿನಲ್ಲಿ ಸ್ಥಾಪಿಸಲಾಗುವ ವಾಸದ ಘಟಕಗಳು ಹೊರದೂಡುವ ಹೊಗೆ, ಅನಿಲ, ಇತರೆ ಕಲ್ಮಶಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ರೀತಿಯ ಹಾನಿಯಾಗದಂತೆ ಹಾಗೂ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು. ವಾಸದ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನಲ್ಲಿ ಸ್ಥಾಪಿಸುವ ವಾಸದ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಪರಿಸರ ಇಲಾಖೆಗೆ ಅನುಮತಿ ಹೊಂದಿರತಕ್ಕದ್ದು.

11. ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ / ರಿಟ್ ಅರ್ಜಿ/ ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

12. ಪ್ರಸ್ತಾವಿತ ಜಮೀನಿನ ಬಗ್ಗೆ ಯಾವುದೇ ಭೂಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿದ್ದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

13. ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶವನ್ನು ಯಾವುದೇ ಸೂಚನೆ ನೀಡದೇ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು. ಅಲ್ಲದೇ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೇ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು. ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೇದಾರರಿಂದ ವಸೂಲಿ ಮಾಡಲಾಗುವುದು.

---3.

627



**ಷೆಡ್ಯೂಲ್ ವಿವರ**

ಬೆಂಗಳೂರು ಜಿಲ್ಲೆ ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್.ಪುರಂ ಹೋಬಳಿ, ದೊಡ್ಡನೆಕ್ಕುಂದಿ ಗ್ರಾಮದ ಸರ್ವೆ ನಂಬರ್ 51/1ರಲ್ಲಿ 3–38 ಎಕರೆ/ಗುಂಟೆ (ಮೂರು ಎಕರೆ ಮೂವತ್ತ ಎಂಟು ಗುಂಟೆ ವಿಸ್ತೀರ್ಣಕ್ಕೆ ಮಾತ್ರ) ವಿಸ್ತೀರ್ಣದ ಭೂ ಪರಿವರ್ತಿತ ಜಮೀನಿನ ಚಕ್ಕುಬಂದಿ:

**-: ಚಕ್ಕುಬಂದಿ :-**

| | |
|---|---|
| ಪೂರ್ವಕ್ಕೆ | ಸರ್ವೆ ನಂಬರ್ 51/3ರ ಜಮೀನು |
| ಪಶ್ಚಿಮಕ್ಕೆ | ಸರ್ವೆ ನಂಬರ್ 50ರ ಜಮೀನು |
| ಉತ್ತರಕ್ಕೆ | ಸರ್ವೆ ನಂಬರ್ 49ರ ಜಮೀನು ಮತ್ತು ರಸ್ತೆ |
| ದಕ್ಷಿಣಕ್ಕೆ | ಸರ್ವೆ ನಂಬರ್ 51/2ರ ಜಮೀನು |

ಸಹಿ/-
(ಹೆಚ್.ರಾಮಾಂಜನೇಯ)
ವಿಶೇಷ ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ,ಬೆಂಗಳೂರು.

<u>ಪ್ರತಿಯನ್ನು ಮುಂದಿನ ಮಾಹಿತಿಗಾಗಿ/ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಲಾಗಿದೆ.</u>

1) ತಹಶೀಲ್ದಾರರು, ಬೆಂಗಳೂರು ಪೂರ್ವ ತಾಲ್ಲೂಕು, ರವರಿಗೆ ಮೂಲ ಕಡತ ಹಾಗೂ ಚಲನ್‌ದೊಂದಿಗೆ ಕಳುಹಿಸುತ್ತಾ ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂಬರ್ ಭೂ ಪರಿವರ್ತನೆಯಾಗಿದೆ ಎಂದು ಸಂಬಂಧಪಟ್ಟ ಆರ್.ಟಿ.ಸಿ.ಯಲ್ಲಿ ಕೂಡಲೇ ನಮೂದಿಸತಕ್ಕದ್ದು. ಮತ್ತು ಈ ಜಮೀನಿಗೆ ಖಾತೇದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕ್ರಮಗೊಳಿಸುವುದು.
2) ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬಳ್ಳಾರಿ ರಸ್ತೆ, ಬೆಂಗಳೂರು ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲಾಗಿದೆ.
3) ಉಪವಿಭಾಗಾಧಿಕಾರಿಗಳು, ಬೆಂಗಳೂರು ಉತ್ತರ ಉಪವಿಭಾಗ, ಪೋಡಿಯಂ ಬ್ಲಾಕ್, ಬೆಂಗಳೂರು. ರವರಿಗೆ
4) ಭೂ ಮಾಪನ ತಾಂತ್ರಿಕ ಸಹಾಯಕರು ಹಾಗೂ ಪದನಿಮಿತ್ತ ಭೂ ದಾಖಲೆಗಳ ಉಪನಿರ್ದೇಶಕರು, ಜಿಲ್ಲಾಧಿಕಾರಿಗಳ ಕಛೇರಿ,ಬೆಂಗಳೂರು. ಇವರಿಗೆ ಆರ್.ಟಿ.ಸಿ ಹಾಗೂ ನಕ್ಷೆಯ ಪ್ರತಿಯೊಂದಿಗೆ ಕಳುಹಿಸುತ್ತಾ ಭೂ ಪರಿವರ್ತನಾ ಪೋಡಿ ಕಾರ್ಯವನ್ನು ಜರೂರಾಗಿ ಪೂರೈಸಲು ಸೂಚಿಸಿದೆ.
5) ಉಪನೋಂದಣಾಧಿಕಾರಿಗಳು, ಕೆ.ಆರ್.ಪುರಂ / ಮಹದೇವಪುರ, ಬೆಂಗಳೂರು ಪೂರ್ವ ತಾಲ್ಲೂಕು ರವರಿಗೆ
6) ಅರ್ಜಿದಾರರಾದ ಶ್ರೀ ಜಿ. ಪ್ರಭಾಕರ್ ಬಿನ್ ಓಬಳೇಶ್, ನಂ.3/1, ಪಟೇಲ್ ಹೌಸ್, ಅಡುಗೋಡಿ, ಬೆಂಗಳೂರು-560030 ರವರ ದೃಢೀಕೃತ ಅಂಚೆ ಮೂಲಕ ಕಳುಹಿಸಲಾಗಿದೆ.
7) ಕಟ್ಟಿನ ಪ್ರತಿ.

ವಿಶೇಷ ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ,ಬೆಂಗಳೂರು.
30/10

482

(13)

<u>ಕರ್ನಾಟಕ ಸರ್ಕಾರ</u>

ನಂ.ಎ.ಎಲ್.ಎನ್. :(ಪೂ)ಎಸ್.ಆರ್ : (ಕೃ.ಹೋ)95/07-08

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ: 3.1.2011.

<u>ತಿದ್ದುಪಡಿ ಅಧಿಕೃತ ಜ್ಞಾಪನ</u>

ವಿಷಯ: ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್.ಪುರಂ ಹೋಬಳಿ, ಶೀಗೇಹಳ್ಳಿ ಗ್ರಾಮದ ಸ.ನಂ. 51/2 ರಲ್ಲಿ 4-36 ಎಕರೆಗುಂಟೆ ( 0-03 ಗುಂಟೆ `ಎ` ಖರಾಬ್ ಸೇರಿ) ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕೆ ಭೂ ಪರಿವರ್ತನೆಯಾಗಿದ್ದು ಅರ್ಜಿದಾರರ ಕೋರಿಕೆಯಂತೆ ಗ್ರಾಮ ಮತ್ತು ತಾಲ್ಲೂಕಿನ ಹೆಸರನ್ನು ತಿದ್ದುಪಡಿ ಮಾಡಿ ಅಧಿಕೃತ ಜ್ಞಾಪನ ನೀಡುವ ಬಗ್ಗೆ.

ಉಲ್ಲೇಖ:
1) ಈ ಪ್ರಾಧಿಕಾರದ ಸಮ ಸಂಖ್ಯೆಯ ಅಧಿಕೃತ ಜ್ಞಾಪನದ ದಿನಾಂಕ: 13.10.2008.
2) ಅರ್ಜಿದಾರರಾದ ಶ್ರೀ ಡಿ.ಲೋಕೇಶ್ವರ ರಾವ್ ಬಿನ್ ಬಿ.ರಾಧಾಕೃಷ್ಣಮೂರ್ತಿ ರವರ ಮನವಿ ದಿ: 18.11.2010.

* * * * *

ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್.ಪುರಂ ಹೋಬಳಿ, ಶೀಗೇಹಳ್ಳಿ ಗ್ರಾಮದ ಸ.ನಂ. 51/2 ರಲ್ಲಿ 4-36 ಎಕರೆಗುಂಟೆ ( 0-03 ಗುಂಟೆ `ಎ` ಖರಾಬ್ ಸೇರಿ) ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕೆ ಶ್ರೀ ಡಿ.ಲೋಕೇಶ್ವರ ರಾವ್ ಬಿನ್ ಬಿ.ರಾಧಾಕೃಷ್ಣಮೂರ್ತಿ ರವರಿಗೆ ಉಲ್ಲೇಖ(1) ರನ್ವಯ ಭೂ ಪರಿವರ್ತನೆಯಾಗಿರುತ್ತದೆ.

ತದನಂತರ ಅರ್ಜಿದಾರರಾದ ಶ್ರೀ ಡಿ.ಲೋಕೇಶ್ವರ ರಾವ್ ಬಿನ್ ಬಿ.ರಾಧಾಕೃಷ್ಣಮೂರ್ತಿ ರವರು ಈ ಪ್ರಾಧಿಕಾರಕ್ಕೆ ದಿನಾಂಕ: 18.11.2010 ರಂದು ಮನವಿ ಸಲ್ಲಿಸಿ, ಉಲ್ಲೇಖ(3) ರಲ್ಲಿ ತಾಲ್ಲೂಕಿನ ಹಾಗೂ ಉಲ್ಲೇಖ(1) ರ ಅಧಿಕೃತ ಜ್ಞಾಪನಪತ್ರದಲ್ಲಿ ಪುಟ ಸಂಖ್ಯೆ 3 ರಲ್ಲಿ (ಷೆಡ್ಯೂಲ್ ವಿವರ) ಗ್ರಾಮದ ಹೆಸರನ್ನು ತಿದ್ದುಪಡಿ ಮಾಡಿ ಅಧಿಕೃತ ಜ್ಞಾಪನ ನೀಡುವ ನೀಡಲು ಕೋರಿರುತ್ತಾರೆ.

ಅರ್ಜಿದಾರರು ಸಲ್ಲಿಸಿರುವ ಮನವಿಯಂತೆ, ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್.ಪುರಂ ಹೋಬಳಿ, ಶೀಗೇಹಳ್ಳಿ ಗ್ರಾಮದ ಸ.ನಂ. 51/2 ರಲ್ಲಿ 4-36 ಎಕರೆಗುಂಟೆ ( 0-03 ಗುಂಟೆ `ಎ` ಖರಾಬ್ ಸೇರಿ) ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕೆ ಭೂ ಪರಿವರ್ತನೆಯಾಗಿರುವ ಅಧಿಕೃತ ಜ್ಞಾಪನ ಪತ್ರದಲ್ಲಿ ಉಲ್ಲೇಖ(3) ರಲ್ಲಿ ಬೆಂಗಳೂರು ಉತ್ತರ (ಅಪರ) ತಾಲ್ಲೂಕು ಎಂಬುದರ ಬದಲಾಗಿ ಬೆಂಗಳೂರು ಪೂರ್ವ ತಾಲ್ಲೂಕು ಹಾಗೂ ಉಲ್ಲೇಖ(1) ರ ಅಧಿಕೃತ ಜ್ಞಾಪನಪತ್ರದಲ್ಲಿ ಪುಟ ಸಂಖ್ಯೆ 3 (ಷೆಡ್ಯೂಲ್ ವಿವರ) ರಲ್ಲಿ ದೊಡ್ಡನೆಕ್ಕುಂದಿ ಗ್ರಾಮದ ಬದಲಾಗಿ ಶೀಗೇಹಳ್ಳಿ ಗ್ರಾಮ ಎಂಬುದಾಗಿ ಮಾರ್ಪಡಿಸಿದೆ. ಉಳಿದಂತೆ ಮಂಜೂರಾತಿ ಆದೇಶದಲ್ಲಿನ ಯಾವುದೇ ಷರತ್ತುಗಳಲ್ಲಿ ಬದಲಾವಣೆಗಳು ಇರುವುದಿಲ್ಲ.

3/1/2011
(ಜಿ.ಎಸ್.ನಾಯಕ್)
ವಿಶೇಷ ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

ಪ್ರತಿಯನ್ನು:

1. ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬಳ್ಳಾರಿ ರಸ್ತೆ, ಬೆಂಗಳೂರು ರವರಿಗೆ ಸೂಕ್ತ ಕ್ರಮಕ್ಕೆ.
2. ಉಪವಿಭಾಗಾಧಿಕಾರಿಗಳು, ಬೆಂಗಳೂರು ಉತ್ತರ ಉಪವಿಭಾಗ, ಪೋಡಿಯಂ ಬ್ಲಾಕ್, ಬೆಂಗಳೂರು.
3. ತಹಶೀಲ್ದಾರ್, ಬೆಂಗಳೂರು ಪೂರ್ವ ತಾಲ್ಲೂಕು ರವರಿಗೆ ಸೂಕ್ತ ಕ್ರಮಕ್ಕೆ.
4. ಉಪನೋಂದಣಾಧಿಕಾರಿಗಳು, ಕೆ.ಆರ್.ಪುರಂ/ಮಹದೇವಪುರ, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ಇವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
5. ಶ್ರೀ ಡಿ.ಲೋಕೇಶ್ವರರಾವ್ ಬಿನ್ ಬಿ.ರಾಧಾಕೃಷ್ಣಮೂರ್ತಿ, ನಂ.1046, 13ನೇ ಮೈನ್, 4ನೇ ಕ್ರಾಸ್, ಇಂದಿರಾನಗರ, 2ನೇ ಹಂತ, ಬೆಂಗಳೂರು 560038 ರವರಿಗೆ ದೃಢೀಕೃತ ಅಂಚೆ ಮೂಲಕ ಕಳುಹಿಸಲಾಗಿದೆ.
6. ಹೆಚ್ಚಿನ ಪ್ರತಿ.

3/1/2011
ವಿಶೇಷ ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

483 (12)

**ಕರ್ನಾಟಕ ಸರ್ಕಾರ**

ನಂ:ಬಿಡಿಸ್.ಎಎಲ್ಎನ್(ಪೂ)ಎಸ್ಆರ್(ಕೃ.ಹೋ):95/07–08

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ: 30–10–2008.

**ಅಧಿಕೃತ ಜ್ಞಾಪನ**

ವಿಷಯ:– ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್.ಪುರಂ ಹೋಬಳಿ, ಶೀಗೇಹಳ್ಳಿ ಗ್ರಾಮದ ಸರ್ವೆ ನಂ. 51/2ರಲ್ಲಿ 4–36 (0–03 ಗುಂಟೆ ಪಿ ಖರಾಬ್ ಸೇರಿ) ಎಕರೆ/ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಭೂ ಪರಿವರ್ತನೆ ಕೋರಿ ಶ್ರೀ ಡಿ. ಲೋಕೇಶ್ವರರಾವ್ ಬಿನ್ ಬಿ. ರಾಧಾಕೃಷ್ಣಮೂರ್ತಿ, ನಂ. 1046, 13ನೇ ಮುಖ್ಯ ರಸ್ತೆ, 4ನೇ ಕ್ರಾಸ್, ಇಂದಿರಾ ನಗರ, 2ನೇ ಹಂತ, ಬೆಂಗಳೂರು–560 038ರವರ ಅರ್ಜಿ ದಿನಾಂಕ:31–07–2007.

ಉಲ್ಲೇಖ:–
1. ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್‌ಡಿ 7 ಎಲ್‌ಜಿಪಿ 95 ದಿನಾಂಕ:7–6–1999.
2. ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್.ಡಿ:56:ಎಲ್‌ಜಿಪಿ 2008 ದಿನಾಂಕ:10–9–2008 ಮತ್ತು 24–9–2008.
3. ತಹಶೀಲ್ದಾರ್, ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ರವರ ವರದಿ ಸಂಖ್ಯೆ ಎಎಲ್‌ಎನ್:ಎಸ್.ಆರ್:(ಕೆ)20/07–08, ದಿನಾಂಕ : 09–08–2007.
4. ಭೂ ಪರಿವರ್ತನಾ ಶುಲ್ಕ ರೂ. 2,66,805–00, 0–03 ಗುಂಟೆ ಪಿ ಖರಾಬ್‌ಗೆ ಕಿಮ್ಮತ್ತು ರೂ. 2,62,500–00 ಹಾಗೂ ಪೋಡಿ ಶುಲ್ಕ ರೂ.55–00 ಒಟ್ಟು ರೂ. 5,29,360–00 ಗಳನ್ನು ಚಲನ್ ನಂಬರ್–, ದಿ11–10–2007 ರಂದು ಎಸ್.ಬಿ.ಎಂ.ರಾಮಮೂರ್ತಿನಗರ ಶಾಖೆಗೆ ಅರ್ಜಿದಾರರು ಜಮಾ ಮಾಡಿರುತ್ತಾರೆ.
5. ಏಕಗವಾಕ್ಷಿ ಸಮಿತಿಯ ನಡವಳಿಕೆಗಳ ದಿನಾಂಕ: 30–08–2007.

:: 0 ::

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಕಲಂ 95(2), 95(4) ಮತ್ತು 95(7) ರ ಷರತ್ತುಗಳು, ಹಾಗೂ ಷರತ್ತುಗಳಿಗೊಳಪಡಿಸಿ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ನಿಯಮಗಳು 1994 ರ ನಿಯಮ 107(1) ರಂತೆ ಎಕರೆ ಒಂದಕ್ಕೆ ರೂ. 54,450–00 (ಐವತ್ನಾಲ್ಕು ಸಾವಿರದ ನಾಲ್ಕು ನೂರ ಐವತ್ತು) ಗಳಂತೆ ಅರ್ಜಿದಾರರು ಉಲ್ಲೇಖ (4) ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿದ ಮೇರೆಗೆ ಅರ್ಜಿದಾರರಾದ ಶ್ರೀ ಡಿ. ಲೋಕೇಶ್ವರರಾವ್ ಬಿನ್ ಬಿ. ರಾಧಾಕೃಷ್ಣಮೂರ್ತಿ, ನಂ. 1046, 13ನೇ ಮುಖ್ಯ ರಸ್ತೆ, 4ನೇ ಕ್ರಾಸ್, ಇಂದಿರಾ ನಗರ, 2ನೇ ಹಂತ, ಬೆಂಗಳೂರು–560 038ರವರ ಅರ್ಜಿಯನ್ನು ಪರಿಗಣಿಸಿ, ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್.ಪುರಂ ಹೋಬಳಿ, ಶೀಗೇಹಳ್ಳಿ ಗ್ರಾಮದ ಸರ್ವೆ ನಂ. 51/2ರಲ್ಲಿ 4–36 ಎಕರೆ/ಗುಂಟೆ (0–03 ಗುಂಟೆ ಪಿ ಖರಾಬ್ ಸೇರಿ) ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕೆ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1. ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರದಿಂದ ಅಂದರೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ)/ಬಿ.ಎಂ.ಆರ್.ಡಿ.ಎ./(ಸ್ಥಳೀಯ ಯೋಜನಾ ಪ್ರಾಧಿಕಾರ/ ಬಿ.ಎಂ.ಐ.ಸಿ.ಎ.ಪಿ.ಎ/ ಮಾಲಿನ್ಯ ನಿಯಂತ್ರಣಾ ಮಂಡಳಿ ರವರಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.

2. ಈ ಭೂ ಪರಿವರ್ತಿತ ಜಮೀನನ್ನು ವಾಸದ ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಜಮೀನನ್ನು ಪೂರ್ವಾನುಮತಿ ಇಲ್ಲದೇ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.

3. ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ./(ಸ್ಥಳೀಯ ಯೋಜನಾ ಪ್ರಾಧಿಕಾರ/ ಬಿ.ಎಂ.ಐ.ಸಿ.ಎ.ಪಿ.ಎ/ ಪ್ರಾಧಿಕಾರದಿಂದ ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್/ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯದೆ ಪರಭಾರೆ ಮಾಡಕೂಡದು.

———2.

4. ಇತರೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್, ಉದ್ಯಾನವನ, ಸಿ.ಎ ನಿವೇಶನ ಖಾಲಿ ಜಾಗ, ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ./(ಸ್ಥಳೀಯ ಯೋಜನಾ ಪ್ರಾಧಿಕಾರ)/ ಬಿ.ಎಂ.ಐ.ಸಿ.ಎ.ಪಿ.ಎ/ ಪ್ರಾಧಿಕಾರದಿಂದ ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟಪಡಿಸಿದ ನಿಯಮಗಳ ರೀತ್ಯಾ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು.

5. ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದಿತ ನಕ್ಷೆ ಪಡೆಯದ ನಿವೇಶನಗಳನ್ನು/ಕಟ್ಟಡಗಳನ್ನು ನೋಂದಣಾಧಿಕಾರಿಗಳಿಂದ ಉಪನೋಂದಣಾಧಿಕಾರಿಗಳಿಂದ ನೋಂದಾವಣೆ ಮಾಡತಕ್ಕದ್ದಲ್ಲ, ಖಾತೆದಾರರು ಒಂದು ವೇಳೆ ಭೂ ಪರಿವರ್ತನೆ ಮಂಜೂರು ಮಾಡಿರುವ ಜಮೀನಿನ ಪೂರ್ಣ ವಿಸ್ತೀರ್ಣವನ್ನು ಮಾರಾಟ ಮಾಡಲು ಉದ್ದೇಶಿಸಿದಲ್ಲಿ ಆದೇಶದ ಅಡ್ಡಿ ಬರುವುದಿಲ್ಲ.

6. ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ರಸ್ತೆ, ಕುಡಿಯುವ ನೀರು, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತ್ಯ ಒದಗಿಸಿಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

7. ಈ ಜಮೀನಿಗೆ ಆಕಾರ ಪೋಟ್ ಖರಾಬ್ ಜಮೀನು ಇದ್ದಲ್ಲಿ, ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 67 ರಂತೆ ಸರ್ಕಾರದ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು. ಹಾಗೂ ಪ್ರಸ್ತುತ ಭೂ ಪರಿವರ್ತನೆಗೆ ಒಳಪಟ್ಟಿರುವ ಸರ್ವೆ ನಂ. 51/2ರಲ್ಲಿನ 0–03 ಗುಂಟೆ ಎ ಖರಾಬ್ ವಿಸ್ತೀರ್ಣಕ್ಕೆ ಕಿಮ್ಮತ್ತು ರೂ. 2,62,500–00ಗಳನ್ನು ಪಾವತಿಸಿಕೊಳ್ಳಲಾಗಿದ್ದು, ವಾಸದ ಉದ್ದೇಶಕ್ಕಾಗಿ ಬಳಸಲು ಭೂ ಪರಿವರ್ತನೆ ನೀಡಿದೆ. 0–02 ಗುಂಟೆ ವಿಸ್ತೀರ್ಣ ಬಿ ಖರಾಬ್‌ನಲ್ಲಿ ಬರುವ ಕಾರಣ ಇದನ್ನು ಸಾರ್ವಜನಿಕ ಉದ್ದೇಶಕ್ಕಾಗಿ ಮೀಸಲಿರಿಸಲಾಗಿದೆ. ಈ ವಿಸ್ತೀರ್ಣದ ಮೇಲೆ ಅರ್ಜಿದಾರರಿಗೆ ಯಾವುದೇ ಹಕ್ಕು ಇರುವುದಿಲ್ಲ. ಈ ಬಿ ಖರಾಬಿನ ವಿಸ್ತೀರ್ಣದ ಹಕ್ಕು ಯಾವಾಗಲೂ ಸರ್ಕಾರಕ್ಕೆ ಸೇರಿರುತ್ತದೆ. ತಹಸೀಲ್ದಾರ್‌ರವರು ಈ ಬಾಬ್ತು ಆರ್.ಟಿ.ಸಿ.ಯಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.

8. ಸರ್ಕಾರದ ಆದೇಶ ಸಂಖ್ಯೆ ಪಿಡಬ್ಲ್ಯೂಡಿ 7556–665 ಆರ್ ಮತ್ತು ಬಿ–6–54–5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ನಂ. ಪಿ.1/7(11)67, ದಿನಾಂಕ: 01–01–1966 ರಂತೆ ಸರ್ಕಾರವು ಕಾಲಕಾಲಕ್ಕೆ ನೀಡುವ ಆದೇಶದಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 25 ಮೀಟರ್‌ಗಳ ಅಂತರವನ್ನು ಕಾಯ್ದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9. ಭೂ ಪರಿವರ್ತನೆ ಮಂಜೂರಿ ಯಾವ ಉದ್ದೇಶಕ್ಕೆ ಆಗಿರುತ್ತದೆಯೋ ಅದೇ ಉದ್ದೇಶಕ್ಕೆ ಈ ದಿನದಿಂದ ಎರಡು ವರ್ಷಗಳ ಒಳಗಾಗಿ ಉಪಯೋಗಿಸತಕ್ಕದ್ದು.

10. ಈ ಭೂ ಪರಿವರ್ತನಾ ಜಮೀನಿನಲ್ಲಿ ಸ್ಥಾಪಿಸಲಾಗುವ ವಾಸದ ಘಟಕಗಳು ಹೊರದೂಡುವ ಹೊಗೆ, ಅನಿಲ, ಇತರ ಕಲ್ಮಶಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ರೀತಿಯ ಹಾನಿಯಾಗದಂತೆ ಹಾಗೂ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು. ವಾಸದ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನಲ್ಲಿ ಸ್ಥಾಪಿಸುವ ವಾಸದ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಪರಿಸರ ಇಲಾಖೆಗೆ ಅನುಮತಿ ಹೊಂದಿರತಕ್ಕದ್ದು.

11. ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ / ರಿಟ್ ಅರ್ಜಿ/ ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

12. ಪ್ರಸ್ತಾವಿತ ಜಮೀನಿನ ಬಗ್ಗೆ ಯಾವುದೇ ಭೂಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿದ್ದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

13. ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶವನ್ನು ಯಾವುದೇ ಸೂಚನೆ ನೀಡದೇ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು. ಅಲ್ಲದೇ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೇ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು. ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೇದಾರರಿಂದ ವಸೂಲಿ ಮಾಡಲಾಗುವುದು.

——3.

485



**ಷೆಡ್ಯೂಲ್ ವಿವರ**

ಬೆಂಗಳೂರು ಜಿಲ್ಲೆ ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್.ಪುರಂ ಹೋಬಳಿ, ದೊಡ್ಡನೆಕ್ಕುಂದಿ ಗ್ರಾಮದ ಸರ್ವೆ ನಂಬರ್ 51/2ರಲ್ಲಿ 4-36 ಎಕರೆ/ಗುಂಟೆ (ನಾಲ್ಕು ಎಕರೆ ಮೂವತ್ತ ಆರು ಗುಂಟೆ ವಿಸ್ತೀರ್ಣಕ್ಕೆ ಮಾತ್ರ) ವಿಸ್ತೀರ್ಣದ ಭೂ ಪರಿವರ್ತಿತ ಜಮೀನಿನ ಚಕ್ಕುಬಂದಿ:

**-: ಚಕ್ಕುಬಂದಿ :-**

| | |
|---|---|
| ಪೂರ್ವಕ್ಕೆ | ಲಿಂಕ್ ರಸ್ತೆ |
| ಪಶ್ಚಿಮಕ್ಕೆ | ಹಳ್ಳ |
| ಉತ್ತರಕ್ಕೆ | ಸ.ನಂ.50 ಮತ್ತು ಸ.ನಂ. 51/1ರ ಜಮೀನು |
| ದಕ್ಷಿಣಕ್ಕೆ | ಸ.ನಂ. 16 ಮತ್ತು 15ರ ಜಮೀನುಗಳು |

ಸಹಿ/-
(ಹೆಚ್.ರಾಮಾಂಜನೇಯ)
ವಿಶೇಷ ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ,ಬೆಂಗಳೂರು.

**ಪ್ರತಿಯನ್ನು ಮುಂದಿನ ಮಾಹಿತಿಗಾಗಿ/ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಲಾಗಿದೆ.**

1. ತಹಶೀಲ್ದಾರರು, ಬೆಂಗಳೂರು ಪೂರ್ವ ತಾಲ್ಲೂಕು, ರವರಿಗೆ ಮೂಲ ಕಡತ ಹಾಗೂ ಚಲನ್‌ದೊಂದಿಗೆ ಕಳುಹಿಸುತ್ತಾ, ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂಬರ್ ಭೂ ಪರಿವರ್ತನೆಯಾಗಿದೆ ಎಂದು ಸಂಬಂಧಪಟ್ಟ ಆರ್.ಟಿ.ಸಿ.ಯಲ್ಲಿ ಕೂಡಲೇ ನಮೂದಿಸತಕ್ಕದ್ದು. ಮತ್ತು ಈ ಜಮೀನಿಗೆ ಖಾತೇದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿಮೆಗೊಳಿಸುವುದು.
2. ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬಳ್ಳಾರಿ ರಸ್ತೆ, ಬೆಂಗಳೂರು ರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
3. ಉಪವಿಭಾಗಾಧಿಕಾರಿಗಳು, ಬೆಂಗಳೂರು ಉತ್ತರ ಉಪವಿಭಾಗ, ಪೋಡಿಯಂ ಬ್ಲಾಕ್, ಬೆಂಗಳೂರು. ರವರಿಗೆ
4. ಭೂ ಮಾಪನ ತಾಂತ್ರಿಕ ಸಹಾಯಕರು ಹಾಗೂ ಪದನಿಮಿತ್ತ ಭೂ ದಾಖಲೆಗಳ ಉಪನಿರ್ದೇಶಕರು, ಜಿಲ್ಲಾಧಿಕಾರಿಗಳ ಕಛೇರಿ,ಬೆಂಗಳೂರು. ಇವರಿಗೆ ಆರ್.ಟಿ.ಸಿ ಹಾಗೂ ನಕ್ಷೆಯ ಪ್ರತಿಯೊಂದಿಗೆ ಕಳುಹಿಸುತ್ತಾ ಭೂ ಪರಿವರ್ತನಾ ಪೋಡಿ ಕಾರ್ಯವನ್ನು ಜರೂರಾಗಿ ಪೂರೈಸಲು ಸೂಚಿಸಿದೆ.
5. ಉಪನೋಂದಣಾಧಿಕಾರಿಗಳು, ಕೆ.ಆರ್.ಪುರಂ / ಮಹದೇವಪುರ, ಬೆಂಗಳೂರು ಪೂರ್ವ ತಾಲ್ಲೂಕು ರವರಿಗೆ
6. ಅರ್ಜಿದಾರರಾದ ಶ್ರೀ ಡಿ. ಲೋಕೇಶ್ವರರಾವ್ ಬಿನ್ ಬಿ. ರಾಧಾಕೃಷ್ಣಮೂರ್ತಿ, ನಂ. 1046, 13ನೇ ಮುಖ್ಯ ರಸ್ತೆ, 4ನೇ ಕ್ರಾಸ್, ಇಂದಿರಾ ನಗರ, 2ನೇ ಘಟ್ಟ, ಬೆಂಗಳೂರು-560 038ರವರ ದೃಢೀಕೃತ ಅಂಚೆ ಮೂಲಕ ಕಳುಹಿಸಲಾಗಿದೆ.
7. ಕಚೇರಿ ಪ್ರತಿ.

ವಿಶೇಷ ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ,ಬೆಂಗಳೂರು.
30/10